ಭಾನುವಾರ, ಫೆಬ್ರುವರಿ 11, 2018 | ಮಂಗಳೂರು | ₹ 5.00 | ಸಂಪುಟ 20 | ಸಂಚಿಕೆ 42 | ಪುಟ 22 + 2 + 4
www.prajavani.net
/prajavani.net

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಕನ್ನಡ ದಿನಪತ್ರಿಕೆ

CENTRAL LIBRARY

ಮುಕ್ತಛಂದ
ಬದುವಿ ಎಂಬ ಜೀವಕಾರಂಜಿ

ತಾಯಂದಿರ ಕನಸು ನನಸು ಮಾಡಿದ ಮಕ್ಕಳು 4
ನಿವೃತ್ತ ನ್ಯಾಯಮೂರ್ತಿ ವಿ.ಗೋಪಾಲಗೌಡ ಸಂದರ್ಶನ
ಸರ್ವ ಜನಾಂಗದ ಶಾಂತಿಯ ತೋಟ 9
ಸುಪ್ರೀಂ ತೀರ್ಪು ಕೊಟ್ಟ ಮೇಲೂ ಅಡ್ಡಗಾಲೇಕೆ? 6

ರಾಜ್ಯಕ್ಕೆ ಮಾದರಿಯಾದ ವಿಟ್ಲದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ

- 1879ರಲ್ಲಿ ಪ್ರಾರಂಭಗೊಂಡ ಶಾಲೆ
- 1934– 1969ರ ನಡುವೆ 1300 ವಿದ್ಯಾರ್ಥಿಗಳಿದ್ದರು
- ಶಾಲಾ ಶತಮಾನೋತ್ಸವ ವೇಳೆ 960 ಸಂಖ್ಯೆ ಇತ್ತು

# ಶಾಲೆಗಾಗಿ ಹಳೆ ವಿದ್ಯಾರ್ಥಿಗಳ ಕೋಟಿ ವೆಚ್ಚ

ವಿಟ್ಲ: ವಿಟ್ಲ ಎಲಿಮೆಂಟರಿ ಶಾಲೆ ಎಂದೇ ಖ್ಯಾತವಾದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಇಬ್ಬರು ಹಳೆ ವಿದ್ಯಾರ್ಥಿಗಳು ಬಹಳ ಕಾಲ ನೆನಪಲ್ಲಿ ಉಳಿಯುವಂತಹ ಕೋಟಿ ವೆಚ್ಚದ ಕೊಡುಗೆ ನೀಡಿದ್ದಾರೆ.

ಒಂದು ಕಾಲಕ್ಕೆ 1,300 ವಿದ್ಯಾರ್ಥಿಗಳಿದ್ದ ಶಾಲೆ ಇದು. ಎರಡು ವರ್ಷಗಳ ಹಿಂದೆ ವಿದ್ಯಾರ್ಥಿಗಳ ಸಂಖ್ಯೆ 400ಕ್ಕೆ ಇಳಿಯುತ್ತಿದ್ದಂತೆಯೇ ತೀವ್ರ ಆತಂಕ ಎದುರಾಯಿತು. ಇಲ್ಲಿನ ಖ್ಯಾತ ಉದ್ಯಮಿ ಜನಾರ್ದನ ಪೈ ಅವರ ಪುತ್ರ ಯುವ ಉದ್ಯಮಿ ಸುಬ್ರಾಯ ಪೈ ಅವರು ಭಾರತಿ ಜನಾರ್ದನ್ ಸೇವಾ ಟ್ರಸ್ಟ್ ಮೂಲಕ ,ಈ ಶಾಲೆಯನ್ನು ದತ್ತು ಸ್ವೀಕರಿಸಿ ಶಾಲೆಗೆ ಕಾಯಕಲ್ಪ ನೀಡಿದರು.

ರಂಗಮಂದಿರ, ಶತಮಾನೋತ್ಸವ ಕಟ್ಟಡದ ಕೋಣೆಗೆ ಟೈಲ್ಸ್ ಅಳವಡಿಕೆ, ಕಟ್ಟಡಗಳ ದುರಸ್ತಿ, ವಿಜ್ಞಾನ ಪ್ರಯೋಲಯಕ್ಕೆ ಸಾಮಗ್ರಿಗಳ ಪೂರೈಕೆ, ಕ್ರೀಡಾಪಕರಣಗಳು, ಪುಸ್ತಕ ಕೊಡುಗೆ, ಆರು ಗೌರವ ಶಿಕ್ಷಕರ ನೇಮಿಸಿ, ಅವರಿಗೆ ವೇತನ ನೀಡಲಾಗುತ್ತಿದೆ. 6ರಿಂದ 8ನೇ ತರಗತಿ ವರೆಗೆ ಆಂಗ್ಲ ಮಾಧ್ಯಮ ಪ್ರಾರಂಭಿಸಲಾಗಿದೆ. ಅಡುಗೆ ಕೋಣೆ ವಿಸ್ತರಣೆ, ಆವರಣಗೋಡೆ, ಸ್ಮಾರ್ಟ್ ಬಾಲವಾಡಿ ಕೇಂದ್ರ ಪ್ರಾರಂಭಿಸಿದ್ದು, 64 ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ. ಕೊಳವೆ ಬಾವಿ ದುರಸ್ತಿಗೊಳಿಸಿ ನೀರಿನ ಸಮಸ್ಯೆ ಬಾರದಂತೆ ಮಾಡಿದ್ದಾರೆ. ಶಾಲೆ ಹಳೆ ವಿದ್ಯಾರ್ಥಿ ಹಾಗೂ ಬೆಂಗಳೂರಿನ ಸುಪ್ರಜಿತ್ ಇಂಡಸ್ಟ್ರೀಸ್‌ನ ಆಡಳಿತ ನಿರ್ದೇಶಕ, ಇಲ್ಲಿನ ಖ್ಯಾತ ವೈದ್ಯ ದಿ.ಡಾ. ಮಂಜುನಾಥ ರೈ ಅವರ ಪುತ್ರ ಅಜಿತ್ ಕುಮಾರ್ ರೈ ಅವರು ಶಾಲೆಗೆ ₹ 1.25 ಕೋಟಿ ವೆಚ್ಚದ ಮೂರು ಮಹಡಿಯ 10 ತರಗತಿ ಕೋಣೆಗಳ ಸುಸಜ್ಜಿತ ಕಟ್ಟಡ ಮತ್ತು ಸಭಾ ಮಂದಿರದ ಬೃಹತ್ ಕಟ್ಟಡವನ್ನು ನಿರ್ಮಿಸಿ ಕೊಟ್ಟಿದ್ದಾರೆ.

ಗ್ರಾನೈಟ್ ನೆಲದಿಂದ ಶೋಭಿಸುವ ನೆಲದ 'ಶ್ರೀಮತಿ ಮತ್ತು ಡಾ. ಕೆ ಮಂಜುನಾಥ ರೈ ವಿದ್ಯಾ ಸೌಧ' ಇದೀಗ ಲೋಕಾರ್ಪಣೆಗೆ ಸಿದ್ಧವಾಗಿದೆ. ₹2.50 ಲಕ್ಷ ವೆಚ್ಚದಲ್ಲಿ ಬಾಲಕಿಯರ ಶೌಚಾಲಯ ನಿರ್ಮಿಸಿದ್ದಾರೆ. ಅಜಿತ್ ಕುಮಾರ್ ರೈ ಅವರು ಪ್ರತಿವರ್ಷವೂ ಸಾವಿರಾರು ವಿದ್ಯಾರ್ಥಿಗಳಿಗೆ ಲಕ್ಷಾಂತರ ರೂಪಾಯಿ ವಿದ್ಯಾರ್ಥಿ ವೇತನ ನೀಡುತ್ತಿದ್ದಾರೆ.

ಮಹಮ್ಮದ್ ಅಲಿ, ವಿಟ್ಲ

'ಸ್ಮಾರ್ಟ್ ಬಾಲವಾಡಿ

ಸ್ಮಾರ್ಟ್ ಬಾಲವಾಡಿಕೇಂದ್ರ ಪ್ರಾರಂಭಿಸಿದ್ದು, 64 ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ.




ಉದ್ಘಾಟನೆಗೆ ಸಿದ್ಧಗೊಂಡಿರುವ ₹1.20 ಕೋಟಿ ವೆಚ್ಚದ ಕಟ್ಟಡ

## 'ಶಾಲೆ ಉಳಿಸುವ ಪಣ'

ಶಾಲೆಯಲ್ಲಿ ವರ್ಷದಿಂದ ವರ್ಷಕ್ಕೆ ಮಕ್ಕಳ ಸಂಖ್ಯೆ ಕುಸಿಯುತ್ತಿರುವುದನ್ನು ಕಂಡ ಈ ಇಬ್ಬರು ಹಳೆ ವಿದ್ಯಾರ್ಥಿಗಳು ಶಾಲೆ ಉಳಿಸುವ ಪಣ ತೊಟ್ಟರು. ಅದರ ಫಲವಾಗಿಯೇ ಅದೆಷ್ಟೋ ಸಾವಿರ ವಿದ್ಯಾರ್ಥಿಗಳ ವಿದ್ಯಾರ್ಜನೆಗೆ ಅವಕಾಶ ದೊರೆತಿದೆ.

## ಹಳೆವಿದ್ಯಾರ್ಥಿಗಳ ಸಹಕಾರ

ಪ್ರತಿ ಊರಿನ ಹಳೆ ವಿದ್ಯಾರ್ಥಿಗಳು ಸರ್ಕಾರಿ ಶಾಲೆಯ ಉನ್ನತೀಕರಣದ ಅಗತ್ಯತೆಯನ್ನು ಕಂಡುಕೊಂಡಲ್ಲಿ ಇಡೀ ದೇಶದ ಸರ್ಕಾರಿ ಶಾಲೆಗಳು ಯಾವುದೇ ಖಾಸಗಿ ಶಾಲೆಯನ್ನು ಮೀರಿ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ನೀಡುವುದು ಸಾಧ್ಯವಿದೆ ಎಂದು ಸುಬ್ರಾಯ ಪೈ ಹೇಳುತ್ತಾರೆ.

## ಮಾದರಿ ಕಾರ್ಯ

ಸರ್ಕಾರಿ ಶಾಲೆಯನ್ನು ಉಳಿಸುವ ಉದ್ದೇಶದಿಂದ ಇಂತಹ ಕಾರ್ಯ ಮಾಡುತ್ತಿರುವ ನಮ್ಮ ಶಾಲೆಯ ಹಳೆ ವಿದ್ಯಾರ್ಥಿಗಳ ಈ ಕಾರ್ಯ ಶ್ಲಾಘನೀಯ. ಸರ್ಕಾರಿ ಶಾಲೆಗಳ ಹಿರಿಯ ವಿದ್ಯಾರ್ಥಿಗಳು ಇದೇ ರೀತಿ ಮಾಡುವಂತಾಗಬೇಕು ಎಂದು ಹೇಳುತ್ತಾರೆ ಶಾಲೆಯ ಮುಖ್ಯಗುರು ವಿಶ್ವನಾಥ ಕುಳಾಲು.

## ಶಾಲೆಯ ಇತಿಹಾಸ

**570** ಈಗಿನ ವಿದ್ಯಾರ್ಥಿಗಳ ಸಂಖ್ಯೆ

ಒಂದು ಕಾಲಕ್ಕೆ ವಿದ್ಯಾರ್ಥಿ ಸಂಖ್ಯೆಯಲ್ಲಿ ಜಿಲ್ಲೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದ ಸರ್ಕಾರಿ ಶಾಲೆ

**10** ತರಗತಿ ಕೊಠಡಿ